ಕರ್ನಾಟಕ ಸರ್ಕಾರ

# ಬಂಡಿಕೊಡಿಗೇಹಳ್ಳಿ ಗ್ರಾಮ ಪಂಚಾಯಿತಿ ಕಾರ್ಯಾಲಯ

ಕಛೇರಿ : ಬಂಡಿಕೊಡಿಗೇಹಳ್ಳಿ, ಜಾಲ ಹೋಬಳಿ, ಯಲಹಂಕ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ – 562149.

ನಂ.ಗ್ರಾ.ಪಂ.ಬ/ಸಿ.ಆರ್/12/2025–26 ದಿನಾಂಕ: 10–07–2025

## –:ನಿರಾಕ್ಷೇಪಣಾ ಪತ್ರ:–

ಬೆಂಗಳೂರು ನಗರ ಜಿಲ್ಲೆ, ಯಲಹಂಕ ತಾಲ್ಲೂಕು, ಜಾಲ ಹೋಬಳಿ, ಬಂಡಿಕೊಡಿಗೇಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹೂವಿನಾಯಕನಹಳ್ಳಿ ಗ್ರಾಮದ ಸರ್ವೇ ನಂ. 120 ಮತ್ತು 121 ರಲ್ಲಿನ 53418 ಚದರ ಮೀಟರ್ ಪ್ರದೇಶವು ಮಾನ್ಯ ಜಿಲ್ಲಾಧಿಕಾರಿ ರವರ ಪರಿಷ್ಕೃತ ಭೂಪರಿವರ್ತನೆ ಅಧಿಕೃತ ಜ್ಞಾಪನಾ ಆದೇಶ ಸಂಖ್ಯೆ: ಡಿ.ಎಸ್/ಎ.ಎಲ್.ಎನ್/ಎನ್.ಎ/107/04–05. ದಿನಾಂಕ: 15/12/2024 ರಂತೆ ಆಲ್ಟೈನ್ ಹೌಸಿಂಗ್ ಡೆವೆಲಪ್‌ಮೆಂಟ್ ಕಾರ್ಪೋರೇಷನ್ ಲಿಮಿಟೆಡ್ ರೆಪ್ರೆಸೆಂಟೆಡ್ ಬೈ ಮೆನೇಜಿಂಗ್ ಡೈರೆಕ್ಟರ್ ಶ್ರೀ ಕಬೀರ್ ರವರ ಹೆಸರಿಗೆ ಭೂಪರಿವರ್ತನೆಯಾಗಿರುತ್ತದೆ. ಸದರಿ ಜಮೀನಿನಲ್ಲಿ ಶ್ರೀ ಕಬೀರ್ ರವರು ವಸತಿ ಬಡಾವಣೆ ನಿರ್ಮಿಸಲು ಉದ್ದೇಶಿಸಿದ್ದು, ಸದರಿಯವರು ಉದ್ದೇಶಿಸಿರುವ ವಸತಿ ಬಡಾವಣೆಯಲ್ಲಿ ಮೂಲಭೂತ ಸೌಕರ್ಯಗಳಾದ ರಸ್ತೆ, ನೀರು ಸರಬರಾಜು, ಒಳಚರಂಡಿ ವ್ಯವಸ್ಥೆಯನ್ನು ಅಭಿವೃದ್ಧಿ ಪಡಿಸುವುದಕ್ಕೆ ಗ್ರಾಮ ಪಂಚಾಯಿತಿ ವತಿಯಿಂದ ಯಾವುದೇ ಆಕ್ಷೇಪಣೆ ಇರುವುದಿಲ್ಲ.

ಸಕ್ಷಮ ಪ್ರಾಧಿಕಾರದಿಂದ ಅನುಮೋದಿತ ನಕ್ಷೆಯಂತೆ ಉದ್ದೇಶಿತ ವಸತಿ ಬಡಾವಣೆ ಕಾಮಗಾರಿಗಳು ಪೂರ್ಣಗೊಂಡ ನಂತರ ಗ್ರಾಮ ಪಂಚಾಯಿತಿಗೆ ಕಟ್ಟಬೇಕಾದ ವಿವಿಧ ತೆರಿಗೆಗಳನ್ನು ಹಾಗೂ ಕುಡಿಯುವ ನೀರಿಗೆ ಸಂಬಂಧಪಟ್ಟಂತಹ ಹಣವನ್ನು ಸಂದಾಯ ಮಾಡಿದ ನಂತರ ಅವಶ್ಯಕತೆ ಇದ್ದಲ್ಲಿ ಈಗಿರುವ ನೀರಿನ ಮೂಲಗಳಿಂದ ಕುಡಿಯುವ ನೀರನ್ನು ಸರಬರಾಜು ಮಾಡಲಾಗುವುದೆಂದು ಈ ಮೂಲಕ ದೃಢೀಕರಿಸುತ್ತೇವೆ. ಕುಡಿಯುವ ನೀರಿನ ಸಮಸ್ಯೆಗಳು ಉದ್ಭವಿಸಿದ್ದಲ್ಲಿ ಸರಬರಾಜಿನಲ್ಲಿ ವ್ಯತ್ಯಾಸ ಹಾಗೂ ಸಂಪೂರ್ಣ ಸ್ಥಗಿತಗೊಳಿಸಲಾಗುವುದೆಂದು ಕೂಡ ತಿಳಿಯತಕ್ಕದ್ದು ಹಾಗೂ ಸದರಿ ಜಮೀನು ಬಾಗಲೂರು–ಮೈಲನಹಳ್ಳಿ ಮಾರ್ಗವಾಗಿ ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಮುಖ್ಯ ರಸ್ತೆಗೆ ಹೊಂದಿಕೊಂಡಿದ್ದು ರಸ್ತೆ ಸಂಪರ್ಕವು ಸಹ ಇರುತ್ತದೆ.

ಈ ವಸತಿ ಬಡಾವಣೆಗೆ ಕುಡಿಯುವ ನೀರು ಲಭ್ಯವಿದ್ದಲ್ಲಿ ನೀರಿನ ಸಂಪರ್ಕ ನೀಡಲು ಯಾವುದೇ ಆಕ್ಷೇಪಣೆ ಇರುವುದಿಲ್ಲವೆಂದು ಈ ಮೂಲಕ ಸಂಬಂಧಪಟ್ಟವಿರಗೆ ನಿರಾಕ್ಷೇಪಣಾ ಪತ್ರವನ್ನು ನೀಡಲಾಗಿದೆ.

ಪಂಚಾಯಿತಿ ಅಭಿವೃದ್ಧಿ ಅಧಿಕಾರಿ
ಬಂಡಿಕೊಡಿಗೇಹಳ್ಳಿ ಗ್ರಾಮ ಪಂಚಾಯಿತಿ
ಯಲಹಂಕ ತಾ ಬೆಂ.ನಗರ.ಜ